ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1805
ವಿಧಾನ ಪರಿಷತ್ ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು	:	ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು
ಉತ್ತರಿಸಬೇಕಾದ ದಿನಾಂಕ	:	15.03.2022

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ವಿಫುಲ ಅವಕಾಶಗಳಿರುವುದರಿಂದ ಸಣ್ಣ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕೈಗೊಂಡಿರುವ ಕ್ರಮಗಳೇನು;	ಬೀದರ್ ಜಿಲ್ಲೆಯು ಒಳಗೊಂಡಂತೆ ಎಲ್ಲಾ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗಾಗಿ ಕರ್ನಾಟಕ ಸರ್ಕಾರವು ಈ ಕೆಳಗಿನ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. 1. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ. 25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ. 2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು. 3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ. 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು

		ನೀಡಲಾಗುತ್ತಿದೆ. 4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ. 60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. 5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.5.00 ಕೋಟಿ ಯೋಜನಾ ವೆಚ್ಚದಲ್ಲಿ The Debit Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಗರಿಷ್ಠ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ. 6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ. 1. ಮುದ್ರಾಂಕ ಶುಲ್ಕ ವಿನಾಯಿತಿ 2. ನೋಂದಣಿ ಶುಲ್ಕ ರಿಯಾಯಿತಿ. 3. ಬಂಡವಾಳ ಹೂಡಿಕೆ ಸಹಾಯಧನ 4.ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ 5. ಭೂ ಪರಿವರ್ತನಾ ಶುಲ್ಕ ಮರುಪಾವತಿ. 6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ. 7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ. 8. ವಿದ್ಯುತ್ ತೆರಿಗೆ ವಿನಾಯಿತಿ 9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ 10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ 11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ
ಆ)	ಜಿಲ್ಲೆಯಲ್ಲಿ ಸ್ಥಳೀಯವಾಗಿ ಲಭ್ಯವಾಗುವ ಕಚ್ಚಾ ವಸ್ತುಗಳ ಸದ್ಬಳಕೆ ಮಾಡಿಕೊಂಡು ಜಿಲ್ಲೆಯ ಯುವ ಜನರಿಗೆ ಹೆಚ್ಚಿನ ಉದ್ಯೋಗ ದೊರೆಯುವಂತೆ ಮಾಡಲು ಸಣ್ಣ	ಜಿಲ್ಲೆಯಲ್ಲಿ ಸ್ಥಳೀಯವಾಗಿ ಲಭ್ಯವಾಗುವ ಕಚ್ಚಾ ವಸ್ತುಗಳ ಸದ್ಬಳಕೆ ಮಾಡಿಕೊಂಡು ಜಿಲ್ಲೆಯ ಯುವ ಜನರಿಗೆ ಹೆಚ್ಚಿನ ಉದ್ಯೋಗ ದೊರೆಯುವಂತೆ ಮಾಡಲು ಸರ್ಕಾರ

	ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ;	ರೂಪಿಸಿರುವ ಯೋಜನೆಗಳ ವಿವರಗಳನ್ನು ಉಪ ಪ್ರಶ್ನೆ (ಅ)ಕ್ಕೆ ನೀಡಿರುವ ಉತ್ತರದಲ್ಲಿ ಒದಗಿಸಲಾಗಿದೆ.
ಇ)	ಕರ್ನಾಟಕ ರಾಜ್ಯ ಕೈಗಾರಿಕೆ ನೀತಿ 2020-25 ರಂತೆ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ಉತ್ತೇಜಿಸಲು 2021-22 ನೇ ಸಾಲಿಗೆ ಮೀಸಲಿಟ್ಟ ಅನುದಾನ ಎಷ್ಟು?	ಸರ್ಕಾರವು ಕರ್ನಾಟಕ ರಾಜ್ಯ ಕೈಗಾರಿಕೆ ನೀತಿ 2020-25 / 2014-19/2009-14 ರಂತೆ ಪ್ರೋತ್ಸಾಹ ಮತ್ತು ರಿಯಾಯತಿ ಸೌಲಭ್ಯಗಳನ್ನು ರಾಜ್ಯದ ಅರ್ಹ ಕೈಗಾರಿಕೆಗಳಿಗೆ ಉತ್ತೇಜಿಸಲು 2021-22ನೇ ಸಾಲಿನಲ್ಲಿ ರೂ. 100.00 ಕೋಟಿಗಳನ್ನು ಹಂಚಿಕೆ ಮಾಡಿರುತ್ತದೆ. ಅದೇ ರೀತಿಯಲ್ಲಿ ಸರ್ಕಾರವು ಕರ್ನಾಟಕ ಕೃಷಿ ಮತ್ತು ಆಹಾರ ಸಂಸ್ಕರಣಾ ನೀತಿ-2015 ರಂತೆ ಪ್ರೋತ್ಸಾಹ ಮತ್ತು ರಿಯಾಯತಿ ಸೌಲಭ್ಯಗಳನ್ನು ರಾಜ್ಯದ ಅರ್ಹ ಕೈಗಾರಿಕೆಗಳಿಗೆ ನೀಡಲು 2021-22 ನೇ ಸಾಲಿನಲ್ಲಿ ರೂ.141.75 ಕೋಟಿಗಳನ್ನು ಹಂಚಿಕೆ ಮಾಡಿರುತ್ತದೆ.

ಸಿಐ 51 ಎಸ್ಎಸ್ಐ 2022

(ಎನ್.ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು